ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಎಂಟನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 30ನೇ ಜುಲೈ, 2015
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಸಂತಾಪ ಸೂಚನೆ

2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಸದಸ್ಯರಿಗೆ ಈಗಾಗಲೇ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಐದನೇ ಪಟ್ಟಿಯ ರೀತ್ಯಾ.

3. ಶಾಸನ ರಚನೆ

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕ, 2015
ಶ್ರೀ ಸಿದ್ಧರಾಮಯ್ಯ (ಮುಖ್ಯಮಂತ್ರಿ) ಅವರು:-

ಅ) 2015ನೇ ಸಾಲಿನ **ಲೋಕಾಯುಕ್ತ** (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

4. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಜಗದೀಶ್ ಶೆಟ್ಟರ್, ಬಸವರಾಜ್ ಬೊಮ್ಮಾಯಿ, ವಿಶ್ವೇಶ್ವರ ಹೆಗಡೆ ಕಾಗೇರಿ, ಎಸ್.ಸುರೇಶ್‌ಕುಮಾರ್, ಸಿ.ಟಿ.ರವಿ, ಬಿ.ಎನ್.ವಿಜಯಕುಮಾರ್ ಹಾಗೂ ಇತರರು ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆಗೆ ತಯಾರಿಸಲಾಗಿರುವ ನೂತನ ಟೆಂಡರ್ ಅಂದಾಜು ಪಟ್ಟಿಯಲ್ಲಿನ ಅಕ್ರಮದ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ನಡೆದ **ಚರ್ಚೆಗೆ ಸರ್ಕಾರದ ಉತ್ತರ**

ಮು.ತಿ.ನೋ.,.

2. ಶ್ರೀಯುತರುಗಳಾದ ಕೆ.ಎಸ್.ಪುಟ್ಟಣ್ಣಯ್ಯ, ಅಶೋಕ ಖೇಣಿ ಮತ್ತು ಡಾ|| ಉಮೇಶ್ ಜಿ. ಜಾಧವ್ ಅವರುಗಳು ಮಂಡ್ಯ ಜಿಲ್ಲೆಯಲ್ಲಿ ಅಕ್ರಮವಾಗಿ ನಡೆಯುತ್ತಿರುವ ಗಣಿಗಾರಿಕೆಯ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

3. ಶ್ರೀಯುತರುಗಳಾದ ಎಸ್.ಟಿ.ಸೋಮಶೇಖರ್, ಡಿ.ಜಿ.ಶಾಂತನಗೌಡ, ಕೆ.ಷಡಕ್ಷರಿ, ಬಿ.ಎ. ಬಸವರಾಜ, ವಡ್ನಾಳ ರಾಜಣ್ಣ ಹಾಗೂ ಇತರರು ಹೆಮ್ಮಿಗೆಪುರ ಹಾಗೂ ಅಂಗಧೀರನಹಳ್ಳಿಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದವರು ನಿರ್ಮಿಸಿರುವ ಬನಶಂಕರಿ 6ನೇ ಹಂತದ ಬಡಾವಣೆಯಲ್ಲಿ ನಕಲಿ ದಾಖಲೆ ನೀಡಿ ನಿವೇಶನ ಹಾಗೂ ಹಣ ಪಡೆದಿರುವ ಪ್ರಕರಣದ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

4. ಶ್ರೀಯುತರುಗಳಾದ ಎನ್.ಹೆಚ್.ಕೋನರಡ್ಡಿ, ಸಿ.ಎಸ್.ಶಿವಳ್ಳಿ, ಬಿ.ಆರ್.ಯಾವಗಲ್ ಮತ್ತು ವಿನಯ್ ಆರ್. ಕುಲಕರ್ಣಿ ಅವರುಗಳು ಹುಬ್ಬಳ್ಳಿ-ಧಾರವಾಡ, ನವಲಗುಂದ ಮತ್ತು ಕುಂದಗೋಳ ತಾಲ್ಲೂಕುಗಳ ನಗರ ಹಾಗೂ ಗ್ರಾಮಗಳಿಗೆ ಶಾಶ್ವತ ಕುಡಿಯುವ ನೀರನ್ನು ಸರಬರಾಜು ಮಾಡಲು ಹೊಸ ಪೈಪ್ ಲೈನ್ ಅಳವಡಿಸುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

5. ಶ್ರೀಯುತರುಗಳಾದ ಹೆಚ್.ಎಸ್.ಶಿವಶಂಕರ್, ವೈ.ಎಸ್.ವಿ.ದತ್ತಾ, ಸಿ.ಟಿ. ರವಿ ಮತ್ತು ವಿ.ಸುನೀಲ್‌ಕುಮಾರ್ ಅವರುಗಳು ದಾವಣಗೆರೆ ಚೇತನ ಎಜುಕೇಷನಲ್ ಟ್ರಸ್ಟ್ ಇವರು ಮೂಲಭೂತ ಸೌಕರ್ಯಗಳನ್ನು ಹೊಂದಿಲ್ಲವೆಂದು ಮಾನ್ಯತೆ ರದ್ದುಪಡಿಸಿ ಉಚ್ಚನ್ಯಾಯಾಲಯವು ಆದೇಶ ಹೊರಡಿಸಿರುವುದರಿಂದ ವಿದ್ಯಾರ್ಥಿಗಳಿಗೆ ಉಂಟಾಗಿರುವ ತೊಂದರೆಯ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

6. ಶ್ರೀಯುತರುಗಳಾದ ಜಗದೀಶ್ ಶೆಟ್ಟರ್, ಗೋವಿಂದ ಎಂ. ಕಾರಜೋಳ, ಬಸವರಾಜ ಬೊಮ್ಮಾಯಿ, ಎಸ್. ಮುನಿರಾಜು, ಎಂ. ಸತೀಶ್ ರೆಡ್ಡಿ ಮತ್ತು ಎಂ.ಪಿ. ಅಪ್ಪಚ್ಚು ರಂಜನ್ ಅವರುಗಳು ಬಾಗಲಕೋಟೆಯ ತೋಟಗಾರಿಕಾ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ನಡೆದಿರುವ ಅಕ್ರಮ ನೇಮಕಾತಿಯಿಂದ ಅರ್ಹ ಅಭ್ಯರ್ಥಿಗಳಿಗೆ ಅನ್ಯಾಯವಾಗಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

7. ಶ್ರೀಯುತರುಗಳಾದ ಎಂ.ಟಿ.ಕೃಷ್ಣಪ್ಪ, ಸಿ.ಬಿ. ಸುರೇಶ್‌ಬಾಬು, ಎಸ್.ಆರ್.ಶ್ರೀನಿವಾಸ್ ಮತ್ತು ಎಸ್. ಮಧುಬಂಗಾರಪ್ಪ ಅವರುಗಳು ತುರುವೇಕೆರೆ ಪಟ್ಟಣಕ್ಕೆ ಕುಡಿಯುವ ನೀರು ಸರಬರಾಜು ಮಾಡುವ ಕೆರೆಯಲ್ಲಿ ಮೀನುಗಾರಿಕೆಗೆ ಅವಕಾಶ ಮಾಡಿಕೊಟ್ಟಿರುವುದರಿಂದ ಕುಡಿಯುವ ನೀರು ಕಲುಷಿತಗೊಂಡಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

ಪು.ತಿ.ನೋ.,.

5. ಗಮನ ಸೆಳೆಯುವ ಸೂಚನೆಗಳು

1. ಶ್ರೀಯುತರುಗಳಾದ ಡಾ|| ಶಿವರಾಜ ಪಾಟೀಲ್, ಬಿ.ಆರ್.ಪಾಟೀಲ್, ಬಸವರಾಜ ರಾಯರೆಡ್ಡಿ, ಹಂಪನಗೌಡ ಬಾದರ್ಲಿ, ಜಿ.ಹಂಪಯ್ಯ ಸಾಹುಕಾರ ಬಲ್ಲಟಗಿ, ಪ್ರತಾಪಗೌಡ ಪಾಟೀಲ್ ಹಾಗೂ ಇತರರು ರಾಯಚೂರಿನಲ್ಲಿ ಐ.ಐ.ಟಿ ಸ್ಥಾಪಿಸುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

2. ಶ್ರೀ ಜೆ.ಆರ್.ಲೋಬೋ ಅವರು ದಕ್ಷಿಣ ಕನ್ನಡ ಜಿಲ್ಲೆಯ ಅನುದಾನಿತ ಪದವಿ ಪೂರ್ವ ಕಾಲೇಜು ನೌಕರರಿಗೆ ಹೆಚ್.ಆರ್.ಎಂ.ಎಸ್. ನಲ್ಲಿ ಪರಿಷ್ಕೃತ ವೇತನ ವ್ಯತ್ಯಾಸದ ಮೊತ್ತ ಪರಿಗಣಿಸದೆ ಅನುಮೋದನೆ ನೀಡಿರುವುದರಿಂದ ಉಂಟಾಗುತ್ತಿರುವ ತೊಂದರೆಯ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯುವುದು.

3. ಶ್ರೀ ಜಿ.ಹೆಚ್. ಶ್ರೀನಿವಾಸ್ ಅವರು ತರಿಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಅಜ್ಜಂಪುರ ಸರ್ಕಾರಿ ಪದವಿ ಕಾಲೇಜಿನಲ್ಲಿ ಇಂಗ್ಲೀಷ್ ಮೇಜರ್ ಆಯ್ಕೆ ಮಾಡಿಕೊಂಡು ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆ ಇರುವುದರಿಂದ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

4. ಶ್ರೀ ವಿಶ್ವನಾಥ (ಆನಂದ) ಚಂದ್ರಶೇಖರ ಮಾಮನಿ ಅವರು ಸವದತ್ತಿ ಎಲ್ಲಮ್ಮ ಮತಕ್ಷೇತ್ರ ವ್ಯಾಪ್ತಿಯ ಯರಗಟ್ಟಿ ಗ್ರಾಮ ಪಂಚಾಯತಿಯಲ್ಲಿ ಪರಭಾರೆ ಮಾಡಿರುವ ಆಸ್ತಿಗಳನ್ನು ಸಂರಕ್ಷಿಸುವ ಹಾಗೂ ಹಿಂಪಡೆಯುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

5. ಶ್ರೀ ನಾರಾಯಣಗೌಡ ಅವರು ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಸಂಗ್ರಹಿಸಲಾದ ವೃತ್ತಿ ತೆರಿಗೆಯ ಮಾಹಿತಿಯ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

6. ಶ್ರೀ ಹೆಚ್.ಕೆ. ಕುಮಾರಸ್ವಾಮಿ ಅವರು ಹಾಸನ ಜಿಲ್ಲೆ ಗೊರೂರು ಜಲಾಶಯ ಹಿನ್ನೀರಿಗೆ ಭರತೂರು ಜನಾರ್ಧನಹಳ್ಳಿ ಬಳಿ ನಿರ್ಮಿಸುತ್ತಿರುವ ಸೇತುವೆ ಕಾಮಗಾರಿಯು ವಿಳಂಬವಾಗುತ್ತಿರುವುದರಿಂದ ಉಂಟಾಗುತ್ತಿರುವ ತೊಂದರೆಗಳ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

7. ಶ್ರೀ ಪಿಳ್ಳಮುನಿಶಾಮಪ್ಪ ಅವರು ದೇವನಹಳ್ಳಿ ತಾಲ್ಲೂಕಿನಲ್ಲಿ ಪರವಾನಿಗೆ ಪಡೆಯದೆ ಗಣಿಗಾರಿಕೆಯನ್ನು ನಡೆಸುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

8. ಶ್ರೀ ಜಿ.ಎಸ್.ಪಾಟೀಲ್ ಅವರು ಗದಗ ಜಿಲ್ಲೆಯಲ್ಲಿ 2014-15ನೇ ಸಾಲಿನಲ್ಲಿ ಅತಿವೃಷ್ಟಿಯಿಂದ ಹಾನಿಗೊಳಗಾದ ಈರುಳ್ಳಿ ಬೆಳೆದ ರೈತರಿಗೆ ಪರಿಹಾರಧನ ವಿತರಣೆಯಾಗದಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,.

9. ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ ಅವರು ಮಧುಗಿರಿ ತಾಲ್ಲೂಕಿನ ಜೀತವಿಮುಕ್ತರ ಮಾಸಾಶನ ಮತ್ತು ಪುನರ್ವಸತಿಯ ಸಹಾಯಧನ ಬಿಡುಗಡೆಯಾಗದಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

10. ಶ್ರೀ ಹೆಚ್.ಡಿ.ರೇವಣ್ಣ ಅವರು ಹಾಸನ ನಗರದ ಚನ್ನಪಟ್ಟಣದ ಬಸ್ ನಿಲ್ದಾಣದ ಬಳಿ ಹಾಸನ-ಮೈಸೂರು ರಸ್ತೆ ಹಾಗೂ ಹಂಗರಹಳ್ಳಿ ರೈಲ್ವೆ ಮೇಲುಸೇತುವೆ ಕಾಮಗಾರಿಗಳಿಗೆ ಹಣ ಬಿಡುಗಡೆಯಾಗದೆ ಕಾಮಗಾರಿ ವಿಳಂಬವಾಗಿರುವ ಬಗ್ಗೆ ಮಾನ್ಯ ಮೂಲಭೂತ ಸೌಲಭ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವರ ಗಮನ ಸೆಳೆಯುವುದು.

11. ಶ್ರೀ ಸಿ.ಎನ್.ಬಾಲಕೃಷ್ಣ ಮತ್ತು ಶ್ರೀ ಹೆಚ್.ಡಿ.ರೇವಣ್ಣ ಅವರುಗಳು ಮಂಗಳೂರು ಬಂದರಿನಿಂದ ಬೆಂಗಳೂರು ಮಾರ್ಗ ಚೆನ್ನೈ ಬಂದರಿಗೆ ನೇರವಾಗಿ ರೈಲ್ವೆ ಸಂಪರ್ಕ ಕಲ್ಪಿಸುವ ಯೋಜನೆಯ ಕಾಮಗಾರಿ ವಿಳಂಬವಾಗಿರುವುದರಿಂದ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ಮೂಲಭೂತ ಸೌಲಭ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವರ ಗಮನ ಸೆಳೆಯುವುದು.

12. ಶ್ರೀ ಎಂ.ಸತೀಶ್‌ರೆಡ್ಡಿ ಮತ್ತು ಶ್ರೀ ಎಸ್.ಆರ್. ವಿಶ್ವನಾಥ್ ಅವರುಗಳು ಬೆಂಗಳೂರು ಮಹಾನಗರ ವ್ಯಾಪ್ತಿಯ ಅಗರ, ಬೆಳ್ಳಂದೂರು ಭಾಗದಲ್ಲಿನ ಸರ್ವೆ ನಂ. 9, 10,13, 16 ಗಳಲ್ಲಿ 100 ಎಕರೆಗಳಷ್ಟು ಭೂಮಿಯನ್ನು ನೀರು ಸಂಸ್ಕರಣಾ ಘಟಕ ಸ್ಥಾಪನೆಗಾಗಿ ಮೀಸಲಿಟ್ಟು ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

13. ಶ್ರೀ ಸಿ.ಎನ್.ಬಾಲಕೃಷ್ಣ ಅವರು ಶ್ರವಣಬೆಳಗೊಳ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಚನ್ನರಾಯಪಟ್ಟಣ ತಾಲ್ಲೂಕಿನ ನುಗ್ಗೇಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳಿಗೆ ಕುಡಿಯುವ ನೀರಿನ ಯೋಜನೆಯ ಭೂಸ್ವಾಧೀನ ಪ್ರಕ್ರಿಯೆ ವಿಳಂಬವಾಗಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

6. ಅರ್ಧ ಗಂಟೆ ಕಾಲಾವಧಿ ಚರ್ಚೆ

1. ಶ್ರೀ ಎಸ್.ಟಿ. ಸೋಮಶೇಖರ್ ಅವರು "ತಿಪ್ಪಗೊಂಡನಹಳ್ಳಿ ಜಲಾಶಯದ ಸುತ್ತಮುತ್ತಲಿರುವ ನಿರ್ಬಂಧಿತ ವಲಯದ" ಬಗ್ಗೆ ದಿನಾಂಕ: 29.06.2015ರ ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಒಂದನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 15(64)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

2. ಶ್ರೀ ಗುರು ಪಾಟೀಲ ಶಿರವಾಳ ಅವರು "ಗಂಗಾ ಕಲ್ಯಾಣ ಯೋಜನೆಯಡಿ ಕೈಗೊಂಡ ಕಾಮಗಾರಿಗಳ" ಬಗ್ಗೆ ದಿನಾಂಕ: 09.07.2015ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಒಂಭತ್ತನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 125(2900)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಪು.ತಿ.ನೋ.,.

3. ಶ್ರೀ ಸಿ.ಟಿ.ರವಿ ಅವರು "ಕ್ಯಾಲ್ಸಿಯಂ ಕಾರ್ಬೈಡ್ ರಾಸಾಯನಿಕ ಬಳಸುವ" ಬಗ್ಗೆ ದಿನಾಂಕ: 17.07.2015ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಹದಿನೈದನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 213(1509)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

4. ಶ್ರೀ ಹೆಚ್.ಸಿ.ಬಾಲಕೃಷ್ಣ ಅವರು "ಕೃಷಿ ಪತ್ತಿನ ಸಹಕಾರ ಸಂಘಗಳ" ಬಗ್ಗೆ ದಿನಾಂಕ: 17.07.2015ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಹದಿನೈದನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 211(2251)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

5. ಶ್ರೀ ಪಿಳ್ಳಮುನಿಶಾಮಪ್ಪ ಅವರು ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ವಿಜಯಪುರದ ಬೈರಾಪುರ ಗ್ರಾಮದಲ್ಲಿರುವ "ಆಗ್ರೋ ಸಿಂಥ್ ಕೆಮಿಕಲ್" ಕಾರ್ಖಾನೆಯನ್ನು ರೆಡ್ ಇಂಡಸ್ಟ್ರೀ ಎಂದು ಘೋಷಿಸಿದ್ದರೂ, ಈ ಕಾರ್ಖಾನೆಯನ್ನು ಮುಚ್ಚದೇ ಇರುವ ಬಗ್ಗೆ ದಿನಾಂಕ: 14.07.2015ರಂದು ಸದನದಲ್ಲಿ ಗಮನ ಸೆಳೆಯುವ ಸೂಚನೆಯಡಿಯಲ್ಲಿ ಪ್ರಸ್ತಾಪಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

6. ಶ್ರೀ ಆರ್. ಅಶೋಕ್ ಅವರು "ವಾಯುಮಾಲಿನ್ಯ ತಡೆಗೆ ಕ್ರಮದ" ಬಗ್ಗೆ ದಿನಾಂಕ: 20.07.2015ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಹದಿನಾರನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 226(1444)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

7. ಶ್ರೀ ಎಸ್.ಭೀಮಾನಾಯ್ಕ ಅವರು "ಬೈರಾಪುರ ಗ್ರಾಮದಲ್ಲಿರುವ ತುಂಗಾಭದ್ರಾ ಜಲಾಶಯದ ಹಿನ್ನೀರಿನಿಂದ ಏತ ನೀರಾವರಿ ಯೋಜನೆಯಡಿ ಮಾಲ್ವಿ ಜಲಾಶಯಕ್ಕೆ 0.51 ಟಿ.ಎಂ.ಸಿ. ನೀರನ್ನು ಹರಿಸುವ ಬಗ್ಗೆ" ದಿನಾಂಕ: 21.07.2015ರಂದು ಗಮನ ಸೆಳೆಯುವ ಸೂಚನೆಯಡಿಯಲ್ಲಿ ಪ್ರಸ್ತಾಪಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

8. ಶ್ರೀ ಕೆ.ಎಂ.ಶಿವಲಿಂಗೇಗೌಡ ಅವರು "ರಾಜ್ಯದಲ್ಲಿ ನಿರಂತರ ಜ್ಯೋತಿ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳು ಕಳಪೆಯಾಗಿರುವುದರಿಂದ ರೈತರಿಗೆ ಮತ್ತು ಸಾರ್ವಜನಿಕರಿಗೆ ತೊಂದರೆಯಾಗಿರುವ ಕುರಿತು" ದಿನಾಂಕ: 21.07.2015ರಂದು ಗಮನ ಸೆಳೆಯುವ ಸೂಚನೆಯಡಿಯಲ್ಲಿ ಪ್ರಸ್ತಾಪಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

9. ಶ್ರೀ ಬಿ.ಬಿ.ನಿಂಗಯ್ಯ ಮತ್ತು ಶ್ರೀ ಸಿ.ಟಿ. ರವಿ ಅವರುಗಳು "ಡಾ॥ ಡಿ.ಎಂ.ನಂಜುಂಡಪ್ಪ ವರದಿಯನ್ವಯ ಕೈಗೊಂಡಿರುವ ವಿಶೇಷ ಅಭಿವೃದ್ಧಿ ಯೋಜನೆಯಡಿ ಮೂಡಿಗೆರೆ ವಿಧಾನಸಭಾ ಕ್ಷೇತ್ರದ ಚಿಕ್ಕಮಗಳೂರು ತಾಲ್ಲೂಕಿನ ಕೆಲವು ಹೋಬಳಿಗಳನ್ನು ಕೈಬಿಟ್ಟಿರುವ ವಿಷಯದ ಕುರಿತು" ದಿನಾಂಕ: 21.07.2015ರಂದು ಸದನದಲ್ಲಿ ಗಮನ ಸೆಳೆಯುವ ಸೂಚನೆಯಡಿಯಲ್ಲಿ ಪ್ರಸ್ತಾಪಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಪು.ತಿ.ನೋ.,.

10. ಶ್ರೀ ಶಿವಾನಂದ ಎಸ್. ಪಾಟೀಲ್ ಅವರು " ಆಹಾರ ಸಂಸ್ಕರಣಾ ಘಟಕಗಳ" ಬಗ್ಗೆ ದಿನಾಂಕ: 24.07.2015ರಂದು ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಇಪ್ಪತ್ತನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 289(3616)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

7. ಖಾಸಗಿ ಸದಸ್ಯರ ಕಾರ್ಯಕಲಾಪಗಳು

I. ಖಾಸಗಿ ಸದಸ್ಯರ ವಿಧೇಯಕಗಳನ್ನು ಮಂಡಿಸುವುದು

(i) ಕರ್ನಾಟಕ ರಾಜ್ಯ ವಿವಾಹ ವಿಧಿವಿಧಾನಗಳ ನಿಯಂತ್ರಣ ವಿಧೇಯಕ, 2015
(2015ರ ಖಾಸಗಿ ಸದಸ್ಯರ ವಿಧೇಯಕ-01)
ಶ್ರೀ ಕೆ.ಆರ್. ರಮೇಶ್ ಕುಮಾರ್ (ವಿಧಾನ ಸಭಾ ಸದಸ್ಯರು) ಅವರು:-

ಅ) 2015ನೇ ಸಾಲಿನ ಕರ್ನಾಟಕ **ರಾಜ್ಯ ವಿವಾಹ ವಿಧಿವಿಧಾನಗಳ ನಿಯಂತ್ರಣ ವಿಧೇಯಕ (2015ರ ಖಾಸಗಿ ಸದಸ್ಯರ ವಿಧೇಯಕ-01)** ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು:

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

(ii) ಕರ್ನಾಟಕ ಭೂ ಕಂದಾಯ (ಖಾಸಗಿ ಸದಸ್ಯರ ತಿದ್ದುಪಡಿ) ವಿಧೇಯಕ, 2015
(2015ರ ಖಾಸಗಿ ಸದಸ್ಯರ ವಿಧೇಯಕ-02)
ಶ್ರೀ ಕೆ. ಶಿವಮೂರ್ತಿ (ವಿಧಾನ ಸಭಾ ಸದಸ್ಯರು) ಅವರು:-

ಅ) 2015ನೇ ಸಾಲಿನ ಕರ್ನಾಟಕ **ಭೂ ಕಂದಾಯ (2015ರ ಖಾಸಗಿ ಸದಸ್ಯರ ವಿಧೇಯಕ-02)** ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು:

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

(iii) ಕರ್ನಾಟಕ ಶಿಕ್ಷಣ (ತಿದ್ದುಪಡಿ) ವಿಧೇಯಕ, 2015
(2015ರ ಖಾಸಗಿ ಸದಸ್ಯರ ವಿಧೇಯಕ-03)
ಶ್ರೀ ಹೆಚ್.ಎಸ್. ಶಿವಶಂಕರ್ (ವಿಧಾನ ಸಭಾ ಸದಸ್ಯರು) ಅವರು:-

ಅ) 2015ನೇ ಸಾಲಿನ ಕರ್ನಾಟಕ ಶಿಕ್ಷಣ (ತಿದ್ದುಪಡಿ) ವಿಧೇಯಕವನ್ನು **(2015ರ ಖಾಸಗಿ ಸದಸ್ಯರ ವಿಧೇಯಕ ಸಂಖ್ಯೆ-03)** ಮಂಡಿಸಲು ಅನುಮತಿ ಕೋರುವುದು:

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

ಪು.ತಿ.ನೋ.,.

II. ಖಾಸಗಿ ನಿರ್ಣಯ

ಶ್ರೀ ಎಂ.ಟಿ.ಕೃಷ್ಣಪ್ಪ ಅವರು ದಿನಾಂಕ: 02.07.2015 ರಂದು ಮಂಡಿಸಿದ ಈ ಕೆಳಕಂಡ ನಿರ್ಣಯದ ಮೇಲೆ ಮುಂದುವರೆದ ಚರ್ಚೆ.

"ದೇಶದ ಬಹು ರಾಜ್ಯಗಳಲ್ಲಿ ಇಲ್ಲದ ವಿಧಾನಪರಿಷತ್ತು ರಾಜ್ಯದಲ್ಲಿಯೂ ಸಹ ಇರುವುದು ಅವಶ್ಯಕವೆನಿಸುವುದಿಲ್ಲ. ಆದಕಾರಣ ನಮ್ಮ ರಾಜ್ಯದಲ್ಲಿರುವ ವಿಧಾನಪರಿಷತ್ತನ್ನು ವಿಸರ್ಜಿಸುವ" ಕುರಿತು ಈ ಸದನವು ನಿರ್ಣಯಿಸುತ್ತದೆ.

(ಎರಡನೇ ದಿನ)

ಎಂ.ಗುರುರಾಜ
ಕಾರ್ಯದರ್ಶಿ

Raj Nadgouda

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(http://kla.kar.nic.in/assembly/lob/lob.htm)